5

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1073
ಮಾನ್ಯ ಸದಸ್ಯರ ಹೆಸರು : ಶ್ರೀ ಮಂಜುನಾಥ ಭಂಡಾರಿ (ವಿಧಾನ ಪರಿಷತ್ತಿನ ಸದಸ್ಯರು)
ಉತ್ತರಿಸಬೇಕಾದವರು : ಮುಖ್ಯಮಂತ್ರಿಯವರು
ಉತ್ತರಿಸಬೇಕಾದ ದಿನಾಂಕ : 22/09/2022

****

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು ಮೇಲ್ದರ್ಜೆಗೇರಿಸುವ ಕಡತ ಸಂಖ್ಯೆ ಆರ್.ಡಿ.ಪಿ.ಆರ್.29/ಜಿ.ಪಿ.ಎಸ್/2021 ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಹಂತದಲ್ಲಿದೆ; | ಹೌದು. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ಸಂಬಂಧಿತ ಕಡತವು ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. |
| (ಆ) | ಈ ಹಿಂದಿನ ವೇತನ ಆಯೋಗವು ಹುದ್ದೆಯನ್ನು 'ಬಿ' ದರ್ಜೆಗೆ ಮೇಲ್ದರ್ಜೆಗೇರಿಸಲು ಸ್ಪಷ್ಟ ಶಿಫಾರಸ್ಸು ಮಾಡಿದ್ದರೂ ಹಾಗೂ ಈಗಾಗಲೇ 2010 ರಿಂದ ಕರ್ತವ್ಯನಿರ್ವಹಿಸುತ್ತಿರುವ ಪಿ.ಡಿ.ಓ ಗಳು "ಬಿ" ದರ್ಜೆಗಿಂತ ಹೆಚ್ಚಿನ ವೇತನ ಪಡೆಯುತ್ತಿದ್ದು, ರಾಜ್ಯದ ಬೊಕ್ಕಸಕ್ಕೆ ಯಾವುದೇ ಆರ್ಥಿಕ ಹೊರೆಯಿಲ್ಲದಿದ್ದರೂ, ಆರ್ಥಿಕ ಇಲಾಖೆಯಿಂದ ಈವರೆಗೆ ಅನುಮತಿ ನೀಡದಿರಲು ಕಾರಣವೇನು; (ವಿವರ ನೀಡುವುದು) | ವಿವಿಧ ಇಲಾಖೆಗಳ ವಿವಿಧ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು 6ನೇ ರಾಜ್ಯ ವೇತನ ಆಯೋಗವು ಮಾಡಲಾದ ಶಿಫಾರಸ್ಸುಗಳನ್ನು ಪರಿಶೀಲಿಸಲು ರಚಿಸಲಾಗಿದ್ದ ಅಧಿಕಾರಿ ಸಮಿತಿಯ ವರದಿಯಲ್ಲಿನ ಶಿಫಾರಸ್ಸುಗಳ ಬೆಳಕಿನಲ್ಲಿ ವಿವಿಧ ಇಲಾಖೆಗಳ ವಿವಿಧ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸಿ ದಿ: 03.08.2022ರ ಸರ್ಕಾರಿ ಆದೇಶ ಸಂ: ಆಇ 36 ಎಸ್ಆರ್‌ಪಿ 2018(ಭಾ-1)ರಲ್ಲಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.<br><br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ವೃಂದದ ವೇತನ ಶ್ರೇಣಿಯನ್ನು ಮೇಲ್ದರ್ಜೆಗೇರಿಸುವಂತೆ 6ನೇ ರಾಜ್ಯ ವೇತನ ಆಯೋಗವು |
| (ಇ) | ವೇತನ ಆಯೋಗದ ಶಿಫಾರಸ್ಸಿನಂತೆ | |



Generated from eOffice by G JAGADEESHA, CMO-JS(GJ), JOINT SECRETARY, CMO on 20/09/2022 07:22 PM

| | | |
|---|---|---|
| | ಈಗಾಗಲೇ ಪಿ.ಡಿ.ಓ ಹುದ್ದೆಯನ್ನು ಹೊರತುಪಡಿಸಿ, ಉಳಿದ ಹಲವಾರು ವೃಂದದ ಹುದ್ದೆಗಳನ್ನು ಮೇಲ್ದರ್ಜೆಗೇರಿಸಿ ಸರ್ಕಾರವು ಆದೇಶ ಹೊರಡಿಸದಿರಲು ಕಾರಣವೇನು; ಪಿ.ಡಿ.ಓ ಹುದ್ದೆಯನ್ನು ಯಾವಾಗ ಗ್ರೂಪ್ "ಬಿ" ಗೆ ಮೇಲ್ದರ್ಜೆಗೇರಿಸಲಾಗುವುದು? | ಯಾವುದೇ ನಿರ್ದಿಷ್ಟ ಶಿಫಾರಸ್ಸು ಮಾಡಿಲ್ಲದಿರುವುದರಿಂದ ಈ ಹುದ್ದೆಯ ವೇತನ ಶ್ರೇಣಿಯನ್ನು ಪರಿಷ್ಕರಿಸಿರುವುದಿಲ್ಲ. |

ಸಂಖ್ಯೆ: ಆಇ 294 ಸೇ-3 2022

ಬಸವರಾಜ ಬೊಮ್ಮಾಯಿ
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY CMO on 20/09/2022 07:22 PM